# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆರಹಿತ ಪ್ರಶ್ನೆ ಸಂಖ್ಯೆ | : | 175 |
| ವಿಧಾನ ಪರಿಷತ್ ಸದಸ್ಯರ ಹೆಸರು | : | ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 22-09-2020 |

<table>
<tr><th>ಪ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕೋವಿಡ್-19 ಲಾಕ್‌ಡೌನ್ ಪರಿಣಾಮವಾಗಿ ತೀವ್ರ ಆರ್ಥಿಕ ಸಂಕಷ್ಟಕ್ಕೀಡಾಗಿರುವ ಕ್ಷೇತ್ರವನ್ನು ಪುನಶ್ಚೇತನಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;</td><td>
ಕೋವಿಡ್-19 ಲಾಕ್‌ಡೌನ್ ಪರಿಣಾಮವಾಗಿ ತೀವ್ರ ಆರ್ಥಿಕ ಸಂಕಷ್ಟಕ್ಕೀಡಾಗಿರುವ ಕ್ಷೇತ್ರವನ್ನು ಪುನಶ್ಚೇತನಗೊಳಿಸಲು ಸರ್ಕಾರ ಈ ಕೆಳಗಿನ ಕ್ರಮಗಳನ್ನು ಕೈಗೊಂಡಿರುತ್ತದೆ:-
1. ಇಂಧನ ಇಲಾಖೆಯು ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಏಪ್ರಿಲ್ ಮತ್ತು ಮೇ 2020 ತಿಂಗಳ ಬೇಡಿಕೆ ಶುಲ್ಕ ಮತ್ತು ಸ್ಥಿರ ಶುಲ್ಕವನ್ನು ಮನ್ನಾ ಮಾಡಿರುತ್ತದೆ.
2. ಇಂಧನ ಇಲಾಖೆಯು ವಿದ್ಯುತ್ ಬಿಲ್‌ನ್ನು ನಿಗದಿತ ಅವಧಿಯೊಳಗೆ ಪಾವತಿಸುವ ಕೈಗಾರಿಕೆಗಳಿಗೆ ರಿಯಾಯಿತಿಯನ್ನು ನೀಡಿರುತ್ತದೆ. ಹೆಚ್‌ಟಿ ಗರಿಷ್ಠ ಮಿತಿ ರೂ.1.00 ಲಕ್ಷ, ಎಲ್‌ಟಿ ಗರಿಷ್ಠ ಮಿತಿ ರೂ.10,000/-
<table>
<tr><td>1 ರಿಂದ 5 ದಿನದೊಳಗೆ ಪಾವತಿಸಿದಲ್ಲಿ</td><td>ಶೇ 1% ರಿಯಾಯಿತಿ</td></tr>
<tr><td>6 ರಿಂದ 15 ದಿನದೊಳಗೆ ಪಾವತಿಸಿದಲ್ಲಿ</td><td>ಶೇ 0.5% ರಿಯಾಯಿತಿ</td></tr>
<tr><td>15 ರಿಂದ 30 ದಿನದೊಳಗೆ ಪಾವತಿಸಿದಲ್ಲಿ</td><td>ಯಾವುದೇ ರಿಯಾಯಿತಿ ಇರುವುದಿಲ್ಲ</td></tr>
</table>
3. ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಉದ್ಯಮಶೀಲರಿಗೆ ಹಂಚಿಕೆಯಾದ ನಿವೇಶನಗಳ ಕಂತು ಮಾರ್ಚ್, ಏಪ್ರಿಲ್ ಮತ್ತು ಮೇ 2020 ತಿಂಗಳಲ್ಲಿ ಪಾವತಿಸದಿದ್ದಲ್ಲಿ ಆ ಪಾವತಿಯನ್ನು ಕ್ರಮವಾಗಿ 3 ತಿಂಗಳು ಮುಂದೂಡಲಾಗಿದೆ ಮತ್ತು ಈ ಮೊತ್ತಕ್ಕೆ ಯಾವುದೇ ಬಡ್ಡಿಯನ್ನು ವಿಧಿಸುವುದಿಲ್ಲ.
4. ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದಿಂದ ಉದ್ಯಮಶೀಲರಿಗೆ ಹಂಚಿಕೆಯಾದ ನಿವೇಶನಗಳ ಕಂತು, ಮಳಿಗೆಗಳ ಬಾಡಿಗೆ ಮತ್ತು ನೀರಿನ ಶುಲ್ಕಗಳ ಏಪ್ರಿಲ್, ಮೇ ಮತ್ತು ಜೂನ್ 2020 ತಿಂಗಳುಗಳ ಕಂತನ್ನು ಈ ಕೆಳಗಿನಂತೆ ಪಾವತಿಸಲು ಅವಕಾಶ ಕಲ್ಪಿಸಲಾಗಿದೆ. ಇದಕ್ಕೆ ಯಾವುದೇ ಬಡ್ಡಿಯನ್ನು ವಿಧಿಸಲಾಗುವುದಿಲ್ಲ.
</td></tr>
</table>

<table>
<tr><th>ಪ್ರಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td></td><td></td><td><table>
<tr><td>ಏಪ್ರಿಲ್ 2020 ತಿಂಗಳ ಕಂತು</td><td>ಜೂನ್ 2020 ತಿಂಗಳ ಕಂತಿನ ಜೊತೆ ಪಾವತಿಸತಕ್ಕದ್ದು</td></tr>
<tr><td>ಮೇ 2020 ತಿಂಗಳ ಕಂತು</td><td>ಜುಲೈ 2020 ತಿಂಗಳ ಕಂತಿನ ಜೊತೆ ಪಾವತಿಸತಕ್ಕದ್ದು</td></tr>
<tr><td>ಜೂನ್ 2020 ತಿಂಗಳ ಕಂತು</td><td>ಆಗಸ್ಟ್ 2020 ತಿಂಗಳ ಕಂತಿನ ಜೊತೆ ಪಾವತಿಸತಕ್ಕದ್ದು</td></tr>
</table></td></tr>
<tr><td>ಆ)</td><td>ರಾಜ್ಯ ಸರ್ಕಾರದಿಂದ ಕೈಗಾರಿಕಾ ಕ್ಷೇತ್ರದ ಆರ್ಥಿಕ ಪುನಶ್ಚೇತನಕ್ಕೆ ನೀಡಲಾಗಿರುವ ಹಣಕಾಸಿನ ಸಹಾಯಧನ ಮೊತ್ತವೆಷ್ಟು? (ಜಿಲ್ಲಾವಾರು ಮಾಹಿತಿ ನೀಡುವುದು)</td><td>ರಾಜ್ಯ ಸರ್ಕಾರದಿಂದ ಕೈಗಾರಿಕಾ ಕ್ಷೇತ್ರದ ಆರ್ಥಿಕ ಪುನಶ್ಚೇತನಕ್ಕೆ ಮೇಲೆ ವಿವರಿಸಿರುವಂತೆ ಕ್ರಮ ಕೈಗೊಳ್ಳಲಾಗಿದೆ.</td></tr>
</table>

ಸಿಐ 78 ಸಪ್ರಕೈ 2020

(ಜಗದೀಶ ಶೆಟ್ಟರ)
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು